ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

2

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಮಂಡಲ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : ೨೬/೬/೨೦೨೦

## ಶಾಸಕರ ಭವನದ ಅಕ್ರಮ ವಾಸಿಗಳ ತೆರವು

ಶಾಸಕರ ಭವನದ ಆವರಣದಲ್ಲಿ ಕರ್ತವ್ಯ ನಿರ್ವಹಿಸುವ ಕೆಲ ಸಿಬ್ಬಂದಿಗೆ ಕೊರೊನಾ ಸೋಂಕು ದೃಢಪಟ್ಟಿರುವ ಹಿನ್ನೆಲೆಯಲ್ಲಿ ಶಾಸಕರ ಭವನದಲ್ಲಿ ಅನಗತ್ಯವಾಗಿ ತಂಗಿರುವ ವ್ಯಕ್ತಿಗಳನ್ನು ತೆರವುಗೊಳಿಸುವಂತೆ ಸೂಚನೆ ನೀಡಲಾಗಿದೆ.

ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಪರಿಷತ್ ಸಭಾಪತಿ ಪ್ರತಾಪಚಂದ್ರ ಶೆಟ್ಟಿ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ.

ಆರೋಗ್ಯ ಪಾಲನೆ ದೃಷ್ಟಿಯಿಂದ ಶಾಸಕರ ಭವನದ ಕಟ್ಟಡಗಳಿಗೆ ಸೋಂಕು ನಿವಾರಣಾ ಔಷಧಿ ಸಿಂಪಡಿಸುವುದು, ಶಾಸಕರ ಭವನಕ್ಕೆ ಅನಗತ್ಯ ವ್ಯಕ್ತಿಗಳ ಪ್ರವೇಶವನ್ನು ನಿರ್ಬಂಧಿಸುವಂತೆ ಸಭೆಯಲ್ಲಿ ಸೂಚನೆ ನೀಡಲಾಗಿದೆ.

ಶಾಸಕರೊಂದಿಗೆ ಆಪ್ತ ಸಹಾಯಕ, ವಾಹನ ಚಾಲಕ, ಅಂಗರಕ್ಷಕ ಸೇರಿ ನಾಲ್ವರಿಗೆ ಮಾತ್ರ ಪ್ರವೇಶ ಸೀಮಿತಗೊಳಿಸಲಾಗಿದ್ದು ಶಾಸಕರ ಭನವ ಪ್ರವೇಶಿಸುವವರು ಕಡ್ಡಾಯವಾಗಿ ತಮ್ಮ ಹೆಸರು, ವಿಳಾಸ, ಮೊಬೈಲ್ ಸಂಖ್ಯೆಯನ್ನು ನಮೂದಿಸುವಂತೆ ಸೂಚನೆ ನೀಡಲಾಗಿದೆ. ಜತೆಗೆ, ಶಾಸಕ ಭವನದ ಸಿಬ್ಬಂದಿಗೆ ಕೋವಿಡ್ ಪರೀಕ್ಷೆ ನಡೆಸಲು ಸೂಚನೆ ನೀಡಲಾಗಿದೆ.